RNU AIR DHARWAD

FEBRUARY 04, 2026

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

ಭಾರತ ಮತ್ತು ಅಮೆರಿಕ ನಡುವಿನ ಸುಂಕ ಒಪ್ಪಂದವು ಉಭಯ ದೇಶಗಳ, ಸಹಕಾರ ಸಂಬಂಧವನ್ನು ಬಲಪಡಿಸುವಲ್ಲಿ ಮಹತ್ವದ ಮೈಲಿಗಲ್ಲು ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ತಮ್ಮ ಅಭಿಪ್ರಾಯ ಹಂಚಿಕೊಂಡಿರುವ ಅವರು, ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ನಾಯಕತ್ವವು, ಜಾಗತಿಕ ಮಟ್ಟದಲ್ಲಿ ಭಾರತದ ರಾಷ್ಟ್ರೀಯ ಹಿತಾಸಕ್ತಿಯನ್ನು ಕಾಪಾಡುವಲ್ಲಿ ಯಶಸ್ವಿಯಾಗಿದೆ. ಎರಡೂ ರಾ ್ಟ್ರಗಳ ನಡುವಿನ ಈ ಒಪ್ಪಂದ ಸಣ್ಣ ಕೈಗಾರಿಕೆಗಳು, ನವೋದ್ಯಮಗಳು ಹಾಗೂ ಕೌಶಲಪೂರ್ಣ ಕೆಲಸಗಾರರಿಗೆ ಜಾಗತಿಕ ಮಟ್ಟದಲ್ಲಿ ಹೊಸ ಅವಕಾಶಗಳನ್ನು ಸೃಷ್ಟಿಸಲಿವೆ ಎಂದು ತಿಳಿಸಿದ್ದಾರೆ.

<><><>

ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರ ನೀಡುವ ಗಡಿನಾಡು ಚೇತನ ಪ್ರಶಸ್ತಿಗೆ ಸುಪ್ರೀಂ ಕೋರ್ಟ್ ಹಿರಿಯ ವಕೀಲ ಮೋಹನ್ ಕಾತರಕಿ ಸೇರಿದಂತೆ ಐವರನ್ನು ಆಯ್ಕೆ ಮಾಡಲಾಗಿದೆ ಎಂದು ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಈ ಮಾಹಿತಿ ನೀಡಿರುವ ಅವರು, ಜಯದೇವಿ ತಾಯಿ ಲಿಗಾಡೆ ಪ್ರಶಸ್ತಿಗೆ ಮೋಹನ್ ಕಾತರಕಿ,  ಫ.ಗು ಹಳಕಟ್ಟಿ ಪ್ರಶಸ್ತಿಗೆ ವಿಜಯಪುರದ ನಾಗೇಶ ಕುಲಕರ್ಣಿ, ಬೆಳವಡಿ ಮಲ್ಲಮ್ಮ ಪ್ರಶಸ್ತಿಗೆ ಮಸ್ಕತ್ ನಲ್ಲಿ, ಕನ್ನಡ ಸಂಘ ನಡೆಸುತ್ತಿರುವ ಶಾಲೆಯಲ್ಲಿ, ಕನ್ನಡ ಪಾಠ ಮಾಡುತ್ತಿರುವ ಶಿಕ್ಷಕಿಯರನ್ನು ಆಯ್ಕೆ ಮಾಡಲಾಗಿದೆ. ಕಯ್ಯಾರ ಕಿಂಞಣ್ಣ ರೈ ಪ್ರಶಸ್ತಿಗೆ, ಕಾಸರಗೋಡಿನ ನಿವೃತ್ತ ಶಿಕ್ಷಕ ಎನ್.ಚನಿಯಪ್ಪ ನಾಯ್ಕ ಅವರನ್ನು ಆಯ್ಕೆ ಮಾಡಲಾಗಿದೆ ಎಂದರು. ಪ್ರಶಸ್ತಿ ತಲಾ 1 ಲಕ್ಷ ರೂಪಾಯಿ ಹಾಗೂ ಫಲಕ ಒಳಗೊಂಡಿದೆ ಎಂದು ತಿಳಿಸಿದರು. ಚನ್ನಬಸವ ಪಟ್ಟದ್ದೇವರು ಪ್ರಶಸ್ತಿಗೆ ಆಯ್ಕೆಯಾಗಿರುವ, ಗಡಿನಾಡು ಕನ್ನಡಿಗ,  ಪ್ರಸ್ತುತ ರಾಯಚೂರಿನಲ್ಲಿ ವಾಸವಾಗಿರುವ, ಮೂಲತಃ ನಾರಾಯಣಪೇಟೆ ಜಿಲ್ಲೆಯ, ಕನ್ನಡಪರ ಹೋರಾಟಗಾರ ಮಲ್ಲನಗೌಡ ಇಂದುಪುರ ಅವರು ಪ್ರದೇಶ ಸಮಾಚಾರಕ್ಕಾಗಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ಮಲ್ಲನಗೌಡ ಇಂದುಪುರ 39 ಸೆಕೆಂದುಗಳು**

<><><>

ಕರ್ನಾಟಕ ಕೌಶಲ ಅಭಿವೃದ್ಧಿ ನಿಗಮದ ವತಿಯಿಂದ, ವಿಜಯಪುರದ ದರ್ಬಾರ ಪ್ರೌಢಶಾಲೆಯ ಆವರಣದಲ್ಲಿ ಆಯೋಜಿಸಿದ್ದ, "ಯುವ ಸಮೃದ್ಧಿ ಸಮ್ಮೇಳನ–ವಿಜಯಪುರ ಉದ್ಯೋಗ ಮೇಳ" ದಲ್ಲಿ, 2 ಸಾವಿರಕ್ಕೂ ಅಧಿಕ ಅಭ್ಯರ್ಥಿಗಳು ಆಯ್ಕೆಯಾಗಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ ಪಾಟೀಲ್ ತಿಳಿಸಿದ್ದಾರೆ. ಉದ್ಯೋಗ ಮೇಳದಲ್ಲಿ, 140 ಕ್ಕೂ ಹೆಚ್ಚು ಉದ್ಯೋಗದಾತ ಸಂಸ್ಥೆಗಳೂ ಪಾಲ್ಗೊಂಡು, ಸುಮಾರು 4 ಸಾವಿರದ 313 ಅಭ್ಯರ್ಥಿಗಳು ಪರಿಗಣನೆಯ ಹಂತದಲ್ಲಿದ್ದಾರೆ ಎಂದು ಸಚಿವರು ತಿಳಿಸಿದ್ದಾರೆ.

<><><>

ಇಂದು ವಿಶ್ವ ಕ್ಯಾನ್ಸರ್ ದಿನ. ಈ ದಿನದಂದು, ಅರ್ಬುದ ರೋಗದ ಪರಿಣಾಮ ಹಾಗೂ ಆರಂಭಿಕ ಪತ್ತೆಯ ಮಹತ್ವದ ಬಗ್ಗೆ ಜನ ಜಾಗೃತಿ ಮೂಡಿಸಲಾಗುತ್ತದೆ. ರಾಷ್ಟ್ರೀಯ ಆರೋಗ್ಯ ಪ್ರಾಧಿಕಾರ, ಕ್ಯಾನ್ಸರ ಆರೈಕೆ ವ್ಯವಸ್ಥೆಯನ್ನು ಸುದೃಢಗೊಳಿಸುವತ್ತ ಗಮನ ಹರಿಸಿದ್ದು, ಪೂರ್ವಭಾವಿ ರೋಗ ಪತ್ತೆ, ಕೈಗೆಟಕುವ ಚಿಕಿತ್ಸೆ ಹಾಗೂ ಆಯುಷ್ಮಾನ್ ಭಾರತ ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆ; ಡಿಜಿಟಲ್ ಆರೋಗ್ಯ ದಾಖಲೆಗಳ ಮೂಲಕ ಉತ್ತಮ ವೈದ್ಯಕೀಯ ಸೌಲಭ್ಯಗಳನ್ನು ಖಾತ್ರಿಪಡಿಸುತ್ತದೆ.

<><><>

ವಿಕಸಿತ ಭಾರತ ಜಿ–ರಾಮ್–ಜಿ ಯೋಜನೆ ಮೂಲಕ, ದೇಶದಲ್ಲಿ 125 ದಿನಗಳ ಉದ್ಯೋಗ ಖಾತ್ರಿಯನ್ನು ನೀಡಲಾಗುತ್ತಿದೆ. ಈ ಯೋಜನೆ ಗ್ರಾಮೀಣ ಜನತೆಯ ಆರ್ಥಿಕ ಸ್ವಾವಲಂಬನೆಗೆ ಸಹಕಾರಿಯಾಗಿದೆ ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿದರು. ವಿಧಾನಸಭೆಯಲ್ಲಿ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ವಿಬಿ ಜಿ–ರಾಮ್–ಜಿ ಯೋಜನೆಯ ಕುರಿತು ಅವರು ಮಾತನಾಡಿದರು. ಆಡಳಿತ ಪಕ್ಷದ ಶಾಸಕರು ಹಾಗೂ ಪ್ರತಿಪಕ್ಷ ಶಾಸಕರು ಸೃಷ್ಟಿಸಿದ ಗದ್ದಲದ ಮಧ್ಯೆಯೂ ಅವರು ಯೋಜನೆ ಬಗ್ಗೆ ವಿಸ್ತೃತವಾಗಿ ಮಾತನಾಡಿದರು. ವಿಧಾನಪರಿಷತ್ತು ಕಲಾಪದಲ್ಲಿ, ಶಾಸಕ ಐವನ್ ಡಿಸೋಜಾ ಅವರು, ಹೈನುಗಾರರ ಹಿತರಕ್ಷಣೆಗಾಗಿ, ಸೂಕ್ತ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ನೇಮಕದ ಬೇಡಿಕೆಯನ್ನು ಮುಂದಿಟ್ಟರು.

<><><>

ಧಾರವಾಡದ ಕೃಷಿ ವಿಶ್ವವಿದ್ಯಾಲಯದಲ್ಲಿ, ಡಾಕ್ಟರ್ ಎಸ್.ಡಬ್ಲೂ ಮೆಣಸಿನಕಾಯಿ ಅವರ ಸ್ಮರಣಾರ್ಥ, 16ನೇ ಸಂಸ್ಥಾಪನಾ ದಿನಾಚರಣೆ ಹಾಗೂ ರಾಷ್ಟ್ರೀಯ ಸಮ್ಮೇಳನ ಜರುಗಿತು. ಕೃಷಿ ವಿಶ್ವವಿದ್ಯಾಲಯದ ಶಿಕ್ಷಣ ನಿರ್ದೇಶಕರಾದ ಡಾಕ್ಟರ್ ಬಿ.ಡಿ.ಬಿರಾದಾರ ಅವರ ಅಧ್ಯಕ್ಷತೆಯಲ್ಲಿ ಜರುಗಿದ, ರಾಷ್ಟ್ರೀಯ ಸಮ್ಮೇಳನದಲ್ಲಿ, ವಿವಿಧ ವಿಶ್ವವಿದ್ಯಾಲಯಗಳು ಹಾಗೂ ಖಾಸಗಿ ಕ್ಷೇತ್ರಗಳ 166 ವಿಜ್ಞಾನಿಗಳು ಪಾಲ್ಗೊಂಡಿದ್ದರು. ದ್ವಿದಳ ಧಾನ್ಯ, ಅಕ್ಕಿ, ಮೆಕ್ಕೆಜೋಳ ಹಾಗೂ ಹತ್ತಿ ಬೆಳೆಗಳನ್ನು ಒಳಗೊಂಡ ವಿ ’ಯಗಳ ಬಗ್ಗೆ ಉಪನ್ಯಾಸಗಳು ಆಯೋಜನೆಗೊಂಡವು.

<><><>

ಗದಗ ಜಿಲ್ಲಾ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಆಶ್ರಯದಲ್ಲಿ, ಎಂ.ಎಸ್.ಎಂ.ಇ. –ಸೂಕ್ಷ್ಮ, ಸಣ್ಣ, ಮಧ್ಯಮ ಕೈಗಾರಿಕೆ ಉದ್ಯಮದ ಕುರಿತು ಜಾಗೃತಿ ಮೂಡಿಸುವ ಕಾರ್ಯಾಗಾರ ಬೇಟಗೇರಿ ನಗರದಲ್ಲಿ ಜರುಗಿತು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>